# ಅಂಗವಿಕಲರಿಗೆ ಮಾಸಿಕ ನಿರ್ವಹಣಾ ಭತ್ಯೆ

**(ಸರ್ಕಾರಿ ಆದೇಶ ಸಂ:ಆರ್.ಡಿ:74:ಡಿಎಸ್.ಪಿ:2013: ಬೆಂಗಳೂರು ದಿ:30.08.2013)**

ಗ್ರಾಮೀಣ ಪ್ರದೇಶದಲ್ಲಿ ರೂ.12,000/- ಹಾಗೂ ನಗರ ಪ್ರದೇಶದಲ್ಲಿ ರೂ.17,000/- ಕ್ಕಿಂತಲೂ ಕಡಿಮೆ ವಾರ್ಷಿಕ ಆದಾಯವಿರುವ ಕುಟುಂಬದಲ್ಲಿರುವ ಶೇ.40 ರಿಂದ ಶೇ. 74 ರಷ್ಟು ಅಂಗವಿಕಲತೆ ಹೊಂದಿರುವ ವಿಕಲಚೇತನರಿಗೆ ಮಾಹೆಯಾನ ರೂ.500/-ಗಳ ಪೋಷಣಾ ಭತ್ಯೆ ಹಾಗೂ ಶೇ.75 ಹಾಗೂ ಅದಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವವರಿಗೆ ಮಾಹೆಯಾನ ರೂ.1,200/-ಪೋಷಣಾ ಭತ್ಯೆಯನ್ನು ನೀಡಲಾಗುತ್ತಿದೆ. ಸಾಮಾಜಿಕ ಭದ್ರತೆ ಹಾಗೂ ಪಿಂಚಣಿ ನಿರ್ದೇಶನಾಲಯದ ಮುಖಾಂತರ ಸಂಬಂಧಿಸಿದ ತಾಲ್ಲೂಕಿನ ತಹಸೀಲ್ದಾರ್‌ರವರು ಪೋಷಣಾ ಭತ್ಯೆಯನ್ನು ಮಂಜೂರು ಮಾಡುವ ಅಧಿಕಾರವನ್ನು ಹೊಂದಿರುತ್ತಾರೆ.

## ಅರ್ಹತೆಗಳು

- ವ್ಯಕ್ತಿಯ ಕುಟುಂಬದ ವಾರ್ಷಿಕ ಆದಾಯ ಗ್ರಾಮೀಣ ಪ್ರದೇಶದಲ್ಲಿ ರೂ.12,000/- ಹಾಗೂ ನಗರ ಪ್ರದೇಶದಲ್ಲಿ ರೂ.17,000/- ಕ್ಕಿಂತಲೂ ಕಡಿಮೆ ಇರಬೇಕು.
- ವ್ಯಕ್ತಿಯು ಸತತವಾಗಿ ಕರ್ನಾಟಕ ರಾಜ್ಯದಲ್ಲಿ 05 ವರ್ಷಗಳು ವಾಸಿಸಿರಬೇಕು.
- ಸರ್ಕಾರದ ವತಿಯಿಂದ ವೃದ್ಧಾಪ್ಯ ವೇತನ ಒಳಗೊಂಡಂತೆ ಇತರೆ ಯಾವುದೇ ಪಿಂಚಣಿ ಸೌಲಭ್ಯ ಪಡೆಯದ ಅಭ್ಯರ್ಥಿಗಳಾಗಿರಬೇಕು.
- ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ಪಡೆದ ಕುಟುಂಬದ ವಾರ್ಷಿಕ ಆದಾಯ ಪ್ರಮಾಣ ಪತ್ರ ಒದಗಿಸಬೇಕು.
- ವೈದ್ಯಕೀಯ ಪ್ರಾಧಿಕಾರದವರು ನಿಗದಿಪಡಿಸಿದಂತೆ ತಜ್ಞ ವೈದ್ಯಾಧಿಕಾರಿಗಳಿಂದ ಪಡೆದ ಅಂಗವಿಕಲತೆ ಪ್ರಮಾಣ ಪತ್ರವನ್ನು ಒದಗಿಸಬೇಕು.



ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು
ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ
ಬಾಗಲಕೋಟ